



ದಿನಾಂಕ: 31.10.2021 ರಂದು ವಿಧಾನಮಂಡಲದ ವತಿಯಿಂದ ಆಯೋಜಿಸಿದ್ದ, ರಾಷ್ಟ್ರೀಯ ಏಕತಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿಧಾನಪರಿಷತ್ತಿನ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರು ಭಾಗವಹಿಸಿ ಸರ್ದಾರ್ ವಲ್ಲಭಭಾಯಿ ಪಟೇಲ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ನಂತರ ವಿಧಾನಮಂಡಲದ ಸಚಿವಾಲಯದ ಸಿಬ್ಬಂದಿಗಳಿಗೆ ರಾಷ್ಟ್ರೀಯ ಏಕತೆಯ ಬಗ್ಗೆ ವಿಧಾನಸಭೆಯ ಅಧ್ಯಕ್ಷರಾದ ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿಯವರೊಂದಿಗೆ ಜಂಟಿ ಸಂವಾದ ಕಾರ್ಯಕ್ರಮವನ್ನು ನೇರವೇರಿಸಿರು. ಕಾರ್ಯಕ್ರಮದಲ್ಲಿ ಸಭಾಪತಿಯವರ ಆಪ್ತ ಕಾರ್ಯದರ್ಶಿ ಶ್ರೀ ಡಾ. ಜಿ ವಿಶ್ವನಾಥ, ವಿಶೇಷ ಕರ್ತವ್ಯಾಧಿಕಾರಿ ಶ್ರೀ ಡಾ. ಮಹೇಶ್ ವಾಳ್ವೇಕರ್ ವಿಧಾನ ಪರಿಷತ್ತಿನ ಕಾರ್ಯದರ್ಶಿ ಶ್ರೀಮತಿ ಕೆ. ಆರ್ ಮಹಾಲಕ್ಷ್ಮೀ ಹಾಗೂ ವಿಧಾನಸಭೆಯ ಕಾರ್ಯದರ್ಶಿ ಶ್ರೀಮತಿ ಎಂ.ಕೆ ವಿಶಾಲಾಕ್ಷಿ ಮತ್ತು ಸಚಿವಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.